ಸದನದಲ್ಲಿ ಉತ್ತರಿಸುವ ಪ್ರಶ್ನೆ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಗುರುವಾರ, ದಿನಾಂಕ: 18ನೇ ಜುಲೈ, 2019

ಅನಧಿಕೃತ ಗಣಿಗಾರಿಕೆ ಕುರಿತು

ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) -

54 (556) ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕೋಲಾರ ಜಿಲ್ಲೆಯಲ್ಲಿ ಅನಧಿಕೃತ, ನಿಯಮಬಾಹಿರವಾಗಿ ಗಣಿಗಾರಿಕೆ, ಜಲ್ಲಿ ಕ್ರಷರ್, ಎಂ.ಸ್ಯಾಂಡ್ ಉತ್ಪಾದನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗೂ ಈ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಜಲ್ಲಿ ಕ್ರಷರ್ಗಳ ವಿವರ ನೀಡುವುದು ;

(ಆ) ಇಂತಹ ಅನಧಿಕೃತ ನಿಯಮಬಾಹಿರ ಗಣಿಗಾರಿಕೆಗಳಿಂದ ರಾಜ್ಯದ ಬೊಕ್ಕಸಕ್ಕೆ ಸುಮಾರು 125.00 ಕೋಟಿಗಳಷ್ಟು ನಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ವ್ಯವಹಾರದಲ್ಲಿ ಜಿಲ್ಲಾ ಗಣಿಗಾರಿಕೆ ಇಲಾಖೆ ಅಧಿಕಾರಿಗಳು ಶಾಮೀಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)